ಜಾವೇದ್ ಅಖ್ತರ್, ಭಾಆಸೇ.,
ವ್ಯವಸ್ಥಾಪಕ ನಿರ್ದೇಶಕರು

**Jawaid Akhtar, IAS.,**
Managing Director

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ
**Karnataka Power Transmission Corporation Limited**
Kaveri Bhavan, Bengaluru - 560 009.
CIN : U40109KA1999SGCO25521
Office : 080-22244556 / 22214342
Fax : 91-80-22213526
e-mail : md@kptcl.com

ಕವಿಪ್ರನಿನಿ/ಎಸ್ಎ3/73303/2017-18/3 ದಿನಾಂಕ: 05.04.2018
ಲಗತ್ತು: ನಮೂನೆ ಮತ್ತು ಸರ್ಕಾರದ ಪತ್ರ

'ಮಾನ್ಯ ಸರ್ವೋಚ್ಚ ನ್ಯಾಯಾಲಯದ ಪ್ರಕರಣ'
ತುರ್ತು

ವ್ಯವಸ್ಥಾಪಕ ನಿರ್ದೇಶಕರು,
ಬೆವಿಸಕಂ/ಮವಿಸಕಂ/ಹುವಿಸಕಂ/ಗುವಿಸಕಂ/ಚಾವಿಸನಿನಿ
ಬೆಂಗಳೂರು/ಮಂಗಳೂರು/ಹುಬ್ಬಳ್ಳಿ/ಕಲಬುರಗಿ/ಮೈಸೂರು

ಎಲ್ಲಾ ಮುಖ್ಯ ಇಂಜಿನಿಯರ್(ವಿ)ಗಳು,
ಪ್ರಸರಣ ವಲಯ, ಕವಿಪ್ರನಿನಿ
ಬೆಂಗಳೂರು/ತುಮಕೂರು/ಮೈಸೂರು/ಹಾಸನ/ಬಾಗಲಕೋಟೆ/ಕಲಬುರಗಿ.
ಮುಖ್ಯ ಇಂಜಿನಿಯರ್(ವಿ), ಆರ್.ಟಿ. & ಆರ್.&ಡಿ./ಎಸ್.ಎಲ್.ಡಿ.ಸಿ, ಕವಿಪ್ರನಿನಿ

ಮಾನ್ಯರೆ,

**ವಿಷಯ:** ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿ: 09.02.2017 ರ ಆದೇಶದಂತೆ ಪರಿಷ್ಕೃತ ಜೇಷ್ಠತಾ ಪಟ್ಟಿಗಳ ಆಧಾರದ ಮೇಲೆ 'ಸಿ' ಮತ್ತು 'ಡಿ' ಗುಂಪಿನ ನೌಕರರ ಮುಂಬಡ್ತಿ ಹಾಗೂ ಹಿಂಬಡ್ತಿ ಜಾರಿಗೊಳಿಸುವ ಬಗ್ಗೆ.

**ಉಲ್ಲೇಖ:**
1. ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ 2368/2011 (ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಮತ್ತು ಇತರರು) ಹಾಗೂ ಅದರೊಂದಿಗೆ ಸೇರಿದ ಸಿವಿಲ್ ಅಪೀಲು ಸಂಖ್ಯೆ 2369/2011 (ರವೀಶ್ ಕುಮಾರ್ & ಇತರರು ವಿರುದ್ಧ ಕವಿಪ್ರನಿನಿ & ಇತರರು) ಪ್ರಕರಣದಲ್ಲಿ ದಿನಾಂಕ:09.02.2017 ರಂದು ನೀಡಿರುವ ತೀರ್ಪು.
2. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಟಿಪಿಎಆರ್ 182 ಎಸ್ ಆರ್ ಆರ್2011 ದಿನಾಂಕ; 06.05.2017.
3. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69324/2017-18 ದಿ: 08.05.2017
4. ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರ ಪತ್ರ ಸಂಖ್ಯೆ: ಕವಿಪ್ರನಿನಿ/ಎಸ್ಎ3/ 73303/2017-18 ದಿನಾಂಕ: 25.11.2017.
5. ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಮತ್ತು ಇತರರು ಪ್ರಕರಣದಲ್ಲಿ ದಿನಾಂಕ: 09.02.2017 ರ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ಸಂಬಂಧಿಸಿದಂತೆ ದಿನಾಂಕ: 20.03.2018 ರ ಆದೇಶ.
6. ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 639 ಸೇನೆನಿ 2017 ದಿನಾಂಕ: 27.03.2018.
7. ನಿಗಮದ ಪತ್ರ ಸಮಸಂಖ್ಯೆ ದಿನಾಂಕ: 31.03.2018.
8. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 639 ಸೇನೆನಿ 2017 ದಿನಾಂಕ: 04.04.2018.

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-4 ರ ನಿಗಮದ ಪತ್ರದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಕವಿಪ್ರನಿನಿಯ ಮತ್ತು ವಿದ್ಯುತ್ ಸರಬರಾಜು ಕಂಪನಿಗಳ ನೇಮಕಾತಿ/ಪದೋನ್ನತಿ ಪ್ರಾಧಿಕಾರಗಳು ಸಂಬಂಧಿಸಿದ ನೌಕರರ ಅಂತಿಮ ಪರಿಷ್ಕೃತ

ಜೇಷ್ಠತಾ ಪಟ್ಟಿಗಳನ್ನು ನಿಗದಿತ ಕಾಲಾವಧಿಯೊಳಗಾಗಿ ಸಿದ್ಧಪಡಿಸಿ ಅನುಸರಣಾ ವರದಿಯನ್ನು ಸಲ್ಲಿಸಲು ಸೂಚಿಸಲಾಗಿತ್ತು ಮತ್ತು ತದನಂತರ ನಿಗಮದ ಉಲ್ಲೇಖ-7 ರ ಪತ್ರದಲ್ಲಿ ಪರಿಷ್ಕೃತ ಜೇಷ್ಠತಾ ಪಟ್ಟಿಗಳ ಆಧಾರದ ಮೇಲೆ ನೌಕರರ ಮುಂಬಡ್ತಿ ಹಾಗೂ ಹಿಂಬಡ್ತಿಗಳನ್ನು ಜಾರಿಗೊಳಿಸಿ ಕ್ರೋಢೀಕೃತ ಅನುಸರಣಾ ವರದಿಯನ್ನು ಸಲ್ಲಿಸಲು ಸಹಾ ಸೂಚಿಸಲಾಗಿತ್ತು.

ಮುಂದುವರೆದು, ಕರ್ನಾಟಕ ಸರ್ಕಾರವು ಸುತ್ತೋಲೆ ಸಂಖ್ಯೆ: ಸಿಆಸುಇ 639 ಸೇನೆನಿ 2017 ದಿನಾಂಕ: 04.04.2018 ರಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶವನ್ನು **<u>ಚಾಚೂ ತಪ್ಪದೇ ಪಾಲಿಸುವ ನಿಟ್ಟಿನಲ್ಲಿ ಯಾವುದೇ ವಿಳಂಬಕ್ಕೆ ಆಸ್ಪದವಿಲ್ಲದಂತೆ</u>** ಅತ್ಯಾದ್ಯತೆಯ ಮೇರೆಗೆ ತತ್ಪರಿಣಾಮ ಕ್ರಮಗಳನ್ನು ಎಲ್ಲಾ ಇಲಾಖೆಗಳು ಕಡ್ಡಾಯವಾಗಿ ಪೂರ್ಣಗೊಳಿಸಿ ದಿನಾಂಕ: 16.04.2018 ರೊಳಗಾಗಿ ಅನುಸರಣಾ ವರದಿಯನ್ನು ಮುಖ್ಯ ಕಾರ್ಯದರ್ಶಿಯವರಿಗೆ ಸಲ್ಲಿಸಲು ಆದೇಶಿಸಿದೆ.

ಆದ್ದರಿಂದ, ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ಕವಿಪ್ರನಿನಿಯ ಮತ್ತು ವಿದ್ಯುತ್ ಸರಬರಾಜು ಕಂಪನಿಗಳ ಪದೋನ್ನತಿ ಪ್ರಾಧಿಕಾರಗಳು ಈಗಾಗಲೇ ಪ್ರಕಟಿಸಿರುವ 'ಸಿ' ಮತ್ತು 'ಡಿ' ಗುಂಪಿನ ನೌಕರರ ಪರಿಷ್ಕೃತ ಜೇಷ್ಠತಾ ಪಟ್ಟಿಗಳ ಆಧಾರದ ಮೇಲೆ ನೌಕರರ ಮುಂಬಡ್ತಿ ಹಾಗೂ ಹಿಂಬಡ್ತಿಗಳ ಆದೇಶಗಳನ್ನು ಜಾರಿಗೊಳಿಸುವಂತೆ ಸೂಚಿಸಲು ಹಾಗೂ ನಿಮ್ಮ ವಿದ್ಯುತ್ ಸರಬರಾಜು ಕಂಪನಿಯ ಮತ್ತು ಪ್ರಸರಣ ವಲಯಗಳ/ಕಛೇರಿಗಳ ಕಾರ್ಯವ್ಯಾಪ್ತಿಯಲ್ಲಿನ ಸಂಬಂಧಿಸಿದ ಪದೋನ್ನತಿ ಪ್ರಾಧಿಕಾರಗಳು ಜಾರಿಗೊಳಿಸಿದ ಮುಂಬಡ್ತಿ ಹಾಗೂ ಹಿಂಬಡ್ತಿಗಳ ವಿವರಗಳ <u>ಕ್ರೋಢೀಕೃತ ಅನುಸರಣಾ ವರದಿಯನ್ನು</u> ಈ ಪತ್ರದೊಂದಿಗೆ ಲಗತ್ತಿಸಿದ ನಮೂನೆಯಲ್ಲಿ **<u>ದಿನಾಂಕ:11.04.2018 ರ ಅಪರಾಹ್ನ 4.00 ಘಂಟೆಯೊಳಗಾಗಿ</u>** ಕವಿಪ್ರನಿನಿ ನಿಗಮ ಕಾರ್ಯಾಲಯಕ್ಕೆ ತಪ್ಪದೇ ಸಲ್ಲಿಸಲು ಕೋರಿದೆ ಹಾಗೂ ಸಹಿ ಮಾಡಿರುವ ಪ್ರತಿಯನ್ನು ಇ-ಮೇಲ್ ವಿಳಾಸ: **<u>manager.ar.kptcl@gmail.com</u>** ಗೆ ಜರೂರಾಗಿ ಕಳುಹಿಸಲು ಕೋರಿದೆ.

ಮುಂದುವರೆದು, ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶವನ್ನು ಜಾರಿಗೊಳಿಸುವಲ್ಲಿ ವಿಫಲರಾದ ಸಂಬಂಧಪಟ್ಟ ಪ್ರಾಧಿಕಾರಿಗಳ ಮುಖ್ಯಸ್ಥರನ್ನು ನೇರಹೊಣೆಗಾರರನ್ನಾಗಿ ಮಾಡಿ, ಶಿಸ್ತು ಕ್ರಮ ಜರುಗಿಸಲು ಸರ್ಕಾರಕ್ಕೆ ಸಲ್ಲಿಸಲಾಗುವುದು.

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 639 ಸೇನೆನಿ 2017 ದಿನಾಂಕ: 04.04.2018 ರ ಪ್ರತಿಯನ್ನು ಮಾಹಿತಿಗಾಗಿ ಈ ಪತ್ರದೊಂದಿಗೆ ಲಗತ್ತಿಸಿದೆ.

ನಿಮ್ಮ ವಿಶ್ವಾಸಿ,

ಸಹಿ/-
ವ್ಯವಸ್ಥಾಪಕ ನಿರ್ದೇಶಕರು,
ಕವಿಪ್ರನಿನಿ, ಬೆಂಗಳೂರು.

**ಪ್ರತಿಗಳು ಮಾಹಿತಿಗಾಗಿ ಹಾಗೂ ಯಾವುದೇ ವಿಳಂಬಕ್ಕೆ ಆಸ್ಪದವಿಲ್ಲದಂತೆ ಅತ್ಯಾದ್ಯತೆಯ ಮೇರೆಗೆ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ:**

1. ಪ್ರಧಾನ ವ್ಯವಸ್ಥಾಪಕರು(ಆಡಳಿತ ಮತ್ತು ಮಾ.ಸಂ), ಎಸ್ಕಾಂ, ಬೆವಿಸಕಂ/ಮವಿಸಕಂ/ಹುವಿಸಕಂ/ ಗುವಿಸಕಂ/ಚಾವಿಸನಿನಿ
2. ವೃತ್ತಗಳ ಅಧೀಕ್ಷಕ ಇಂಜಿನಿಯರ್(ವಿ)ಗಳು, ಬೆವಿಸಕಂ/ಮವಿಸಕಂ/ಹುವಿಸಕಂ/ಗುವಿಸಕಂ/ಚಾವಿಸನಿನಿ /ಕವಿಪ್ರನಿನಿ.
3. ವಿಭಾಗಗಳ ಕಾರ್ಯನಿರ್ವಾಹಕ ಇಂಜಿನಿಯರ್(ವಿ)ಗಳು, ಬೆವಿಸಕಂ/ಮವಿಸಕಂ/ಹುವಿಸಕಂ/ಗುವಿಸಕಂ/ ಚಾವಿಸನಿನಿ/ಕವಿಪ್ರನಿನಿ.

ವ್ಯವಸ್ಥಾಪಕ ನಿರ್ದೇಶಕರು,
ಕವಿಪ್ರನಿನಿ, ಬೆಂಗಳೂರು.

# <u>ನಮೂನೆ</u>

ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿ: 09.02.2017 ರ ಆದೇಶದಂತೆ ಪರಿಷ್ಕೃತ ಜೇಷ್ಟತಾ ಪಟ್ಟಿಗಳ ಆಧಾರದ ಮೇಲೆ ಜಾರಿಗೊಳಿಸಿದ 'ಸಿ' ಮತ್ತು 'ಡಿ' ಗುಂಪಿನ ನೌಕರರ ಮುಂಬಡ್ತಿ ಹಾಗೂ ಹಿಂಬಡ್ತಿ ಮಾಹಿತಿಗಳ ಬಗ್ಗೆ.

| ಕ್ರ. ಸಂ. | ಪದೋನ್ನತಿ ಪ್ರಾಧಿಕಾರದ ಹೆಸರು ಹಾಗೂ ಕಛೇರಿ ವಿಳಾಸ | ಹುದ್ದೆಯ ಹೆಸರು | ಜಾರಿಗೊಳಿಸಿದ ಮುಂಬಡ್ತಿ ಸಂಖ್ಯೆ | ಜಾರಿಗೊಳಿಸಿದ ಹಿಂಬಡ್ತಿ ಸಂಖ್ಯೆ *(ಹಿಂಬಡ್ತಿ ಹೊಂದಿದ ನೌಕರರ ಪಟ್ಟಿಯೊಂದಿಗೆ) |
|---|---|---|---|---|
| 1. | | | | |
| 2. | | | | |
| 3. | | | | |
| 4. | | | | |
| 5. | | | | |
| 6. | | | | |
| 7. | | | | |
| 8. | | | | |
| 9. | | | | |
| 10. | | | | |

*(ಹಿಂಬಡ್ತಿ ಹೊಂದಿದ ನೌಕರರ ಹೆಸರು ಹಾಗು ವಿವರಗಳೊಂದಿಗೆ ಪಟ್ಟಿಯನ್ನು ಸಹ ಸಲ್ಲಿಸಲು ಕೋರಿದೆ)

**ಸಹಿ**

ಪ್ರಧಾನ ವ್ಯವಸ್ಥಾಪಕರು(ಆಡಳಿತ ಮತ್ತು ಮಾ.ಸಂ.)
ಮುಖ್ಯ ಇಂಜಿನಿಯರ್(ವಿ)(............................)

FTS No. 957191

M.D.
05 APR 2018
KPTCL

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 639 ಸೇಹಿನಿ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 04.04.2018

## ಸುತ್ತೋಲೆ

ವಿಷಯ: ಸಿವಿಲ್ ಅಪೀಲ್ ಸಂಖ್ಯೆ: 2368/2011- ಬಿ.ಕೆ. ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ನೀಡಿರುವ ತೀರ್ಪನ್ನು ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: ಸಮಸಂಖ್ಯೆಯ ದಿನಾಂಕ: 27.03.2018ರ ಸುತ್ತೋಲೆ.

-------

ಶ್ರೀ ಬಿ.ಕೆ. ಪವಿತ್ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ನೀಡಿದ ದಿನಾಂಕ: 09.02.2017ರ ಆದೇಶದಂತೆ ಪರಿಷ್ಕರಿಸಿರುವ ಜೇಷ್ಠತಾ ಪಟ್ಟಿಗಳನ್ನಾಧರಿಸಿ ತತ್ಪರಿಣಾಮ ಕ್ರಮಗಳನ್ನು ಕೈಗೊಳ್ಳಲು ಉಲ್ಲೇಖಿತ ದಿನಾಂಕ: 27.03.2018ರ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿತ್ತು. ಸದರಿ ಆದೇಶ ಹಾಗೂ ಮಾನ್ಯ ಸರ್ವೋಚ್ಛ ನ್ಯಾಯಾಲಯವು ಇತ್ತೀಚೆಗೆ ನೀಡಿದ ಆದೇಶದ ನಂತರ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಸೇರಿದ ಅಧಿಕಾರಿ/ನೌಕರರ ಸಂಘ ಸಂಸ್ಥೆಗಳು ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದ ಸಂಘ ಸಂಸ್ಥೆಗಳು ಭಿನ್ನ ಅಭಿಪ್ರಾಯಗಳೊಂದಿಗೆ ತಮ್ಮ ತಮ್ಮ ಮನವಿಗಳನ್ನು ಆಗಾಗ್ಗೆ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯದ ತೀರ್ಪಿನ ತರುವಾಯ ವಿವಿಧ ಇಲಾಖೆಗಳ ವತಿಯಿಂದ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಈಗಾಗಲೇ ಸಿಆಸುಇ ವತಿಯಿಂದ ಆದೇಶ ಹೊರಡಿಸಲಾಗಿದ್ದರೂ, ಈ ನಿಟ್ಟಿನಲ್ಲಿ ಹೆಚ್ಚಿನ ನಿಖರತೆಗಾಗಿ ಸಿಆಸುಇ, ಕಾನೂನು ಇಲಾಖೆ ಹಾಗೂ ಅಡ್ವೋಕೇಟ್ ಜನರಲ್‌ರವರ ಪ್ರತಿನಿಧಿಯೊಂದಿಗೆ ಸಮಾಲೋಚಿಸಿದ್ದಂತೆ ಈ ಕೆಳಕಂಡಂತೆ ಸ್ಪಷ್ಟೀಕರಣ

ನೀಡುತ್ತ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶವನ್ನು ಚಾಚೂ ತಪ್ಪದೇ ಪಾಲಿಸುವ ನಿಟ್ಟಿನಲ್ಲಿ ಯಾವುದೇ ವಿಳಂಬಕ್ಕೆ ಆಸ್ಪದವಿಲ್ಲದಂತೆ ಅತ್ಯಾದ್ಯತೆಯ ಮೇರೆಗೆ (on utmost priority) ತತ್ಪರಿಣಾಮ ಕ್ರಮಗಳನ್ನು (Consequential action) ಕೈಗೊಳ್ಳಲು ಈ ಕೆಳಕಂಡ ಸೂಚನೆಗಳನ್ನು ನೀಡಲಾಗಿದೆ:-

1) ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶವನ್ನನುಸರಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಹೊರಡಿಸಿರುವ ದಿನಾಂಕ: 06.05.2017ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 182 ಸೇನೀನಿ 2011ರಲ್ಲಿ ನೀಡಿರುವ ಸೂಚನೆಗಳನ್ವಯ ಎಲ್ಲಾ ಇಲಾಖೆಗಳು ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸುವಂತೆ ಈ ಹಿಂದೆಯೇ ಆದೇಶಿಸಲಾಗಿತ್ತು.
2) ಇತ್ತೀಚಿನ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶವನ್ನು ಅನುಷ್ಠಾನಗೊಳಿಸಲು ಕಾಲಮಿತಿ ಇರುವುದರಿಂದ ತತ್ಪರಿಣಾಮ ಕ್ರಮಗಳನ್ನು ಕೈಗೊಳ್ಳುವ ಕಾರ್ಯವನ್ನು ಎಲ್ಲಾ ಇಲಾಖೆಗಳು ಕಡ್ಡಾಯವಾಗಿ ಪೂರ್ಣಗೊಳಿಸಿ, **ದಿನಾಂಕ: 16.04.2018ರೊಳಗಾಗಿ ಅನುಸರಣಾ ವರದಿಯನ್ನು ಮುಖ್ಯ ಕಾರ್ಯದರ್ಶಿಯವರಿಗೆ ಸಲ್ಲಿಸತಕ್ಕದ್ದು.** ಆಡಳಿತ ಇಲಾಖೆಗಳು ತಮ್ಮ ಅಧೀನದಲ್ಲಿ ಬರುವ ಎಲ್ಲಾ ಇಲಾಖೆ/ನಿಗಮ /ಮಂಡಳಿ/ಸ್ವಾಯತ್ತ ಸಂಸ್ಥೆಗಳು ಇತ್ಯಾದಿಗಳಲ್ಲಿನ ಮಾಹಿತಿಯನ್ನು ಕ್ರೋಢೀಕರಿಸಿ ನೀಡುವುದು.
3) ಮುಂದುವರೆದು, ತತ್ಪರಿಣಾಮ ಕ್ರಮವು ಮುಂಬಡ್ತಿ ಮತ್ತು ಹಿಂಬಡ್ತಿಗಳೆರಡನ್ನು ಒಳಗೊಂಡಿದೆಯೆಂದು ಸ್ಪಷ್ಟಪಡಿಸಿದೆ. ಎಲ್ಲಾ ಇಲಾಖೆಗಳು ವಿವಿಧ ವೃಂದಗಳಲ್ಲಿ ಹಿಂಬಡ್ತಿಗೊಳಗಾದವರ ಪಟ್ಟಿಯನ್ನು ತಯಾರಿಸುವುದು.
4) ದಿನಾಂಕ: 27.04.1978ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಸೇಹಿಮ 1977 ಮತ್ತು ತದನಂತರದ ಮುಂಬಡ್ತಿ ಮೀಸಲಾತಿ ಆದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕ್ರಮವಾಗಿ

ನಿಗಧಿಪಡಿಸಿರುವ ಶೇಕಡಾ 15 ಮತ್ತು ಶೇಕಡಾ 3 ಮುಂಬಡ್ತಿಯಲ್ಲಿನ ಮೀಸಲಾತಿಯು ಪ್ರಸ್ತುತವೂ ಚಾಲ್ತಿಯಲ್ಲಿರುತ್ತದೆ.

5) ಯಾವುದಾದರೂ ಇಲಾಖೆಯು ಮೇಲ್ಕಂಡ ನಿರ್ದೇಶನಗಳನ್ನು ಪಾಲಿಸುವಲ್ಲಿ ವಿಫಲರಾದಲ್ಲಿ ಅಂತಹ ಇಲಾಖಾ ಮುಖ್ಯಸ್ಥರನ್ನು ಮುಂದಿನ ಪರಿಣಾಮಗಳಿಗೆ ನೇರವಾಗಿ ಹೊಣೆಗಾರರನ್ನಾಗಿ ಮಾಡಲಾಗುವುದು.

ಈ ಸೂಚನೆಗಳು ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ/ ಆಯೋಗ/ ನಿಗಮ/ ಮಂಡಳಿಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೂ ಅನ್ವಯವಾಗುತ್ತದೆ.

(ಕೆ.ರತ್ನ ಪ್ರಭ)
ಸರ್ಕಾರದ ಮುಖ್ಯ ಕಾರ್ಯದರ್ಶಿ
4/4/2018

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು. ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು-1) ಇವರ ಕಛೇರಿಗೆ ಒದಗಿಸುವುದು.

**ಪ್ರತಿಯನ್ನು:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು
2. ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
3. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
4. ರಾಜ್ಯಪಾಲರ ಅಪರ ಕಾರ್ಯದರ್ಶಿಗಳು
5. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001
6. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-560 001
7. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು-560 001

8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು
9. ಕಾರ್ಯದರ್ಶಿಯವರು, ಕರ್ನಾಟಕ ವಿಧಾನ ಸಭೆ/ ಕರ್ನಾಟಕ ವಿಧಾನ ಪರಿಷತ್ತು, ವಿಧಾನ ಸೌಧ, ಬೆಂಗಳೂರು-560001.
10. * ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01
12. * ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು-560 001
13. * ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕೆ.ಜಿ. ರಸ್ತೆ, ಬೆಂಗಳೂರು.
14. * ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-560 001
14. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(* ಮುಖ ಪತ್ರದೊಂದಿಗೆ)